**ಭಾರತದ ಪ್ರಧಾನಮಂತ್ರಿಯಿಂದ ಭೂತಾನ್ ಭೇಟಿಯ ಕುರಿತು ಜಂಟಿ ಪತ್ರಿಕಾ ಪ್ರಕಟಣೆ (ನವೆಂಬರ್ 11-12, 2025)**

ನವೆಂಬರ್ 12, 2025

ಭೂತಾನ್‌ನ ಗೌರವಾನ್ವಿತ ದೊರೆ ಜಿಗ್ಮೆ ಖೇಸರ್ ನಮ್ಗೆಲ್ ವಾಂಗ್‌ಚುಕ್ ಅವರ ಆಹ್ವಾನದ ಮೇರೆಗೆ, ಭಾರತದ ಗೌರವಾನ್ವಿತ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು 2025 ನವೆಂಬರ್ 11-12 ರಂದು ಭೂತಾನ್‌ಗೆ ಎರಡು ದಿನಗಳ ಅಧಿಕೃತ ಭೇಟಿ ನೀಡಿದರು.

2. ಭೇಟಿಯ ಸಮಯದಲ್ಲಿ, 2025 ನವೆಂಬರ್ 11 ರಂದು ಚಾಂಗ್ಲಿಮಿಥಾಂಗ್‌ನಲ್ಲಿ ಗೌರವಾನ್ವಿತ ನಾಲ್ಕನೇ ಡ್ರುಕ್ ಗ್ಯಾಲ್ಪೋ ಅವರ 70 ನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಭೂತಾನ್ ಜನರೊಂದಿಗೆ ಪ್ರಧಾನಮಂತ್ರಿ ಮೋದಿ ಅವರು ಗೌರವ ಅತಿಥಿಯಾಗಿ ಭಾಗವಹಿಸಿದರು. ಥಿಂಪುವಿನಲ್ಲಿ ನಡೆಯುತ್ತಿರುವ ಜಾಗತಿಕ ಶಾಂತಿ ಪ್ರಾರ್ಥನಾ ಉತ್ಸವದಲ್ಲಿ ಕೂಡಾ ಪ್ರಧಾನಿ ಮೋದಿ ಭಾಗವಹಿಸಿದರು. ಉತ್ಸವದ ಸಮಯದಲ್ಲಿ ಸಾರ್ವಜನಿಕ ದರ್ಶನಕ್ಕಾಗಿ ಥಿಂಪುವಿನಲ್ಲಿ ಇರಿಸಲ್ಪಟ್ಟ ಭಾರತದಿಂದ ಕಳುಹಿಸಲಾದ ಭಗವಾನ್ ಬುದ್ಧನ ಪವಿತ್ರ ಪಿಪ್ರಹ್ವಾ ಅವಶೇಷಗಳ ಉಪಸ್ಥಿತಿಯನ್ನು ಭೂತಾನ್ ದೊರೆ ಶ್ಲಾಘಿಸಿದರು.

3. ಪ್ರಧಾನಮಂತ್ರಿ ಮೋದಿ ಅವರು ಗೌರವಾನ್ವಿತ ದೊರೆ ಮತ್ತು ಹಿರಿಯರಾದ ನಾಲ್ಕನೇ ಡ್ರುಕ್ ಗ್ಯಾಲ್ಪೊ ಅವರೊಂದಿಗೆ ಗೌರವ ಸಭೆಗಳನ್ನು ನಡೆಸಿದರು ಮತ್ತು ಭೂತಾನ್ ಪ್ರಧಾನಿ ದಶೋ ತ್ಸೆರಿಂಗ್ ಟೋಬ್ಗೆ ಅವರೊಂದಿಗೆ ಸಂವಹನ ನಡೆಸಿದರು. ನಾಯಕರ ನಡುವಿನ ಚರ್ಚೆಗಳು ದ್ವಿಪಕ್ಷೀಯ ಸಹಕಾರದ ಪ್ರಮುಖ ಕ್ಷೇತ್ರಗಳು ಮತ್ತು ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳನ್ನು ಒಳಗೊಂಡಿದ್ದವು.

4. ನವೆಂಬರ್ 10 ರಂದು ದೆಹಲಿ ಸ್ಫೋಟದಲ್ಲಿ ಅಮೂಲ್ಯ ಜೀವಗಳ ದಾರುಣ ನಷ್ಟದ ಕುರಿತು ಭೂತಾನ್‌ನ ರಾಜಾಡಳಿತ ಸರ್ಕಾರ ಮತ್ತು ಜನರ ಪರವಾಗಿ ಗೌರವಾನ್ವಿತ ದೊರೆ ಸಂತಾಪ ವ್ಯಕ್ತಪಡಿಸಿದರು ಮತ್ತು ಗಾಯಗೊಂಡವರ ತ್ವರಿತ ಚೇತರಿಕೆಗಾಗಿ ಪ್ರಾರ್ಥಿಸಿದರು. ಭೂತಾನ್‌ನಿಂದ ಬೆಂಬಲ ಮತ್ತು ಒಗ್ಗಟ್ಟಿನ ಸಂದೇಶವನ್ನು ಭಾರತದ ಕಡೆಯವರು ಪ್ರಶಂಸಿಸಿದರು.

5. ಆರ್ಥಿಕ ಉತ್ತೇಜನಾ ಕಾರ್ಯಕ್ರಮವನ್ನು ಒಳಗೊಂಡಂತೆ ಭೂತಾನ್‌ನ 13 ನೇ ಪಂಚವಾರ್ಷಿಕ ಯೋಜನೆಗೆ ಭಾರತದ ನಿರಂತರ ಬೆಂಬಲವನ್ನು ಪ್ರಧಾನಮಂತ್ರಿ ಮೋದಿ ಪುನರುಚ್ಚರಿಸಿದರು, ಭೂತಾನ್‌ಗೆ ತನ್ನ ಪ್ರಮುಖ ಅಭಿವೃದ್ಧಿ ಆದ್ಯತೆಗಳನ್ನು ಸಾಧಿಸಲು ಮತ್ತು ವಲಯಗಳಲ್ಲಿ ಸುಸ್ಥಿರ ಬೆಳವಣಿಗೆಯನ್ನು ಮುಂದುವರಿಸಲು ಸಕ್ರಿಯವಾಗಿ ಸಹಾಯ ಮಾಡುವ ಭಾರತದ ಬದ್ಧತೆಯನ್ನು ಒತ್ತಿ ಹೇಳಿದರು. ದೇಶದ ಅಭಿವೃದ್ಧಿಗೆ ಮಹತ್ತರ

ಕೊಡುಗೆ ನೀಡುತ್ತಿರುವ ಭೂತಾನ್‌ನಾದ್ಯಂತ ಅನುಷ್ಠಾನಗೊಳ್ಳುತ್ತಿರುವ ವಿವಿಧ ಯೋಜನೆಗಳಿಗಾಗಿ ಭೂತಾನ್‌ನ 13 ನೇ ಪಂಚವಾರ್ಷಿಕ ಯೋಜನೆ ಅವಧಿಗೆ ಭಾರತದ ಸಹಾಯವನ್ನು ಭೂತಾನ್ ಕಡೆಯವರು ಪ್ರಶಂಸಿಸಿದರು.

6. ಗೆಲೆಫು ಮೈಂಡ್‌ಫುಲ್ನೆಸ್ ಸಿಟಿಗಾಗಿ ಗೌರವಾನ್ವಿತ ದೊರೆಯ ದೂರದೃಷ್ಟಿಯನ್ನು ಸಾಕಾರಗೊಳಿಸಲು ಭಾರತ ಸರ್ಕಾರದ ಪೂರ್ಣ ಬೆಂಬಲವನ್ನು ಪ್ರಧಾನಮಂತ್ರಿ ಮೋದಿ ತಿಳಿಸಿದರು. ಗೆಲೆಫುಗೆ ಹೂಡಿಕೆದಾರರು ಮತ್ತು ಸಂದರ್ಶಕರ ಚಲನೆಯನ್ನು ಸುಲಭಗೊಳಿಸಲು ಅಸ್ಸಾಂನ ಹತಿಸರ್‌ನಲ್ಲಿ ವಲಸೆ ಚೆಕ್ ಪೋಸ್ಟ್ ಸ್ಥಾಪಿಸುವ ನಿರ್ಧಾರವನ್ನು ಅವರು ಘೋಷಿಸಿದರು. ಗ್ಯಾಲ್ಸಂಗ್ ಅಕಾಡೆಮಿಗಳ ನಿರ್ಮಾಣಕ್ಕೆ ಭಾರತ ಸರ್ಕಾರದ ಬೆಂಬಲವನ್ನು ದೊರೆಗಳು ಪ್ರಶಂಸಿಸಿದರು.

7. ಭಗವಾನ್ ಬುದ್ಧರ ಪವಿತ್ರ ಪಿಪ್ರಹ್ವಾ ಅವಶೇಷಗಳ ಮಾನ್ಯ ಉಪಸ್ಥಿತಿಯಲ್ಲಿ ಗೌರವಾನ್ವಿತ ದೊರೆ ಮತ್ತು ಪ್ರಧಾನಮಂತ್ರಿ ಮೋದಿ ಅವರು ಜಂಟಿಯಾಗಿ 2025 ನವೆಂಬರ್ 11 ರಂದು 1020 ಮೆಗಾವ್ಯಾಟ್‌ನ ಪುನತ್ಸಂಗ್ಚು-II ಜಲವಿದ್ಯುತ್ ಯೋಜನೆಯನ್ನು ಉದ್ಘಾಟಿಸಿದರು. ಈ ಯೋಜನೆಯು ಭೂತಾನ್ ಮತ್ತು ಭಾರತದ ನಡುವೆ ಜಲವಿದ್ಯುತ್ ಕ್ಷೇತ್ರದಲ್ಲಿ ಸ್ನೇಹ ಮತ್ತು ಅನುಕರಣೀಯ ಸಹಕಾರಕ್ಕೆ ಸಾಕ್ಷಿಯಾಗಿದೆ. ಪುನತ್ಸಂಗ್ಚು-II ಯಿಂದ ಭಾರತಕ್ಕೆ ವಿದ್ಯುತ್ ರಫ್ತಿನ ಪ್ರಾರಂಭವನ್ನು ಅವರು ಸ್ವಾಗತಿಸಿದರು. 2024 ಮಾರ್ಚ್‌ನ ಇಂಧನ ಪಾಲುದಾರಿಕೆಯ ಕುರಿತ ಜಂಟಿ ದೃಷ್ಟಿಕೋನದ ಅನುಷ್ಠಾನದ ಬಗ್ಗೆ ಎರಡೂ ಕಡೆಯವರು ತೃಪ್ತಿ ವ್ಯಕ್ತಪಡಿಸಿದರು.

8. 1200 ಮೆಗಾವ್ಯಾಟ್ ಪುನತ್ಸಂಗ್ಚು-I ಜಲವಿದ್ಯುತ್ ಯೋಜನೆಯ ಮುಖ್ಯ ಅಣೆಕಟ್ಟಿನ ರಚನೆಯ ಕೆಲಸವನ್ನು ಪುನರಾರಂಭಿಸುವ ಬಗ್ಗೆ ತಲುಪಿರುವ ತಿಳುವಳಿಕೆಯನ್ನು ನಾಯಕರು ಸ್ವಾಗತಿಸಿದರು ಮತ್ತು ಯೋಜನೆಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಕೆಲಸ ಮಾಡಲು ಒಪ್ಪಿಕೊಂಡರು. ಒಮ್ಮೆ ಪೂರ್ಣಗೊಂಡ ನಂತರ, ಪುನತ್ಸಂಗ್ಚು-I ಎರಡು ಸರ್ಕಾರಗಳು ಜಂಟಿಯಾಗಿ ಅಭಿವೃದ್ಧಿಪಡಿಸಿದ ಅತಿ ದೊಡ್ಡ ಜಲವಿದ್ಯುತ್ ಯೋಜನೆ ಎನಿಸಿಕೊಳ್ಳಲಿದೆ.

9. ಭೂತಾನ್‌ನಲ್ಲಿ ಜಲವಿದ್ಯುತ್ ಯೋಜನೆಗಳಲ್ಲಿ ಭಾರತೀಯ ಕಂಪನಿಗಳ ಸಕ್ರಿಯ ತೊಡಗುವಿಕೆಗಳನ್ನು ಅವರು ಸ್ವಾಗತಿಸಿದರು. ಭೂತಾನ್‌ನಲ್ಲಿ ಇಂಧನ ಯೋಜನೆಗಳಿಗೆ ಹಣಕಾಸು ಒದಗಿಸಲು ಭಾರತ ಸರ್ಕಾರದಿಂದ ₹40 ಬಿಲಿಯನ್ ರಿಯಾಯಿತಿ ಸುಲಭ ಸಾಲ ವ್ಯವಸ್ಥೆ ಘೋಷಣೆಗೆ ಭೂತಾನ್ ಕಡೆಯವರು ಮೆಚ್ಚುಗೆ ವ್ಯಕ್ತಪಡಿಸಿದರು.

10. ಸಮಗ್ರ ಚೆಕ್ ಪೋಸ್ಟ್‌ಗಳನ್ನು ಸ್ಥಾಪಿಸುವುದು ಸೇರಿದಂತೆ ಗಡಿ ಸಂಪರ್ಕವನ್ನು ಸುಧಾರಿಸುವ ಮತ್ತು ಗಡಿ ಮೂಲಸೌಕರ್ಯ ಹೆಚ್ಚಿಸುವ ಪ್ರಾಮುಖ್ಯತೆಯನ್ನು ಎರಡೂ ಕಡೆಯವರು ಒತ್ತಿಹೇಳಿದರು. ಅವರು 2024 ನವೆಂಬರ್‌ನಲ್ಲಿ ದರ್ರಂಗಾದಲ್ಲಿ ವಲಸೆ ಚೆಕ್ ಪೋಸ್ಟ್ ಮತ್ತು 2025 ಮಾರ್ಚ್‌ನಲ್ಲಿ ಜೋಗಿಗೋಫಾದ ಒಳನಾಡಿನ ಜಲಮಾರ್ಗಗಳ ಟರ್ಮಿನಲ್ ಮತ್ತು ಮಲ್ಟಿಮೋಡಲ್ ಲಾಜಿಸ್ಟಿಕ್ಸ್ ಪಾರ್ಕ್ ಕಾರ್ಯಾಚರಣೆ ಪ್ರಾರಂಭಿಸಿರುವುದನ್ನು ಸ್ವಾಗತಿಸಿದರು. 2025 ಸೆಪ್ಟೆಂಬರ್‌ನಲ್ಲಿ ಗಡಿಯಾಚೆಗಿನ ರೈಲು ಸಂಪರ್ಕಗಳ (ಗೆಲೆಫು-ಕೊಕ್ರಝಾರ್ ಮತ್ತು ಸಮ್ಟ್ಸೆ-ಬನಾರ್ಹಟ್) ಸ್ಥಾಪನೆ ಕುರಿತ ತಿಳಿವಳಿಕೆ ಒಪ್ಪಂದ (MoU) ಕ್ಕೆ ಸಹಿ ಹಾಕಿದುದನ್ನು ಮತ್ತು ನಂತರದಲ್ಲಿ ಯೋಜನೆಯ ಅನುಷ್ಠಾನಕ್ಕಾಗಿ ಯೋಜನೆ ಚಾಲನಾ ಸಮಿತಿಯ ಸ್ಥಾಪನೆಯನ್ನು ಎರಡೂ ಕಡೆಯವರು ಸ್ವಾಗತಿಸಿದರು.

11. ಭೂತಾನ್‌ಗೆ ಅಗತ್ಯ ಸರಕುಗಳು ಮತ್ತು ರಸಗೊಬ್ಬರಗಳ ತಡೆರಹಿತ ಪೂರೈಕೆಯ ವ್ಯವಸ್ಥೆಗಳನ್ನು ಸಾಂಸ್ಥಿಕಗೊಳಿಸಲು ಭಾರತ ಸರ್ಕಾರ ಕೈಗೊಂಡ ಕ್ರಮಗಳಿಗೆ ಭೂತಾನ್ ಕಡೆಯವರು ಮೆಚ್ಚುಗೆ ವ್ಯಕ್ತಪಡಿಸಿದರು. ಹೊಸ ವ್ಯವಸ್ಥೆಯಡಿ ಭಾರತದಿಂದ ರಸಗೊಬ್ಬರಗಳ ಮೊದಲ ಸರಕುಗಳ ರವಾನೆಯನ್ನು ಎರಡೂ ಕಡೆಯವರು ಸ್ವಾಗತಿಸಿದರು.

12. STEM, ಫಿನ್‌ಟೆಕ್ ಮತ್ತು ಬಾಹ್ಯಾಕಾಶದ ಹೊಸ ಕ್ಷೇತ್ರಗಳಲ್ಲಿ ಹೆಚ್ಚುತ್ತಿರುವ ಸಹಕಾರದ ಬಗ್ಗೆ ಎರಡೂ ಕಡೆಯವರು ತೃಪ್ತಿ ವ್ಯಕ್ತಪಡಿಸಿದರು. ಭೂತಾನ್‌ನಿಂದ ಭಾರತಕ್ಕೆ ಬರುವವರಿಗೆ QR ಕೋಡ್‌ಗಳನ್ನು ಸ್ಕ್ಯಾನ್ ಮಾಡುವ ಮೂಲಕ ಸ್ಥಳೀಯ ಮೊಬೈಲ್ ಅಪ್ಲಿಕೇಶನ್‌ಗಳನ್ನು ಬಳಸಿಕೊಂಡು ಪಾವತಿಗಳನ್ನು ಮಾಡಲು ಅನುವು ಮಾಡಿಕೊಡುವ UPI ಯ ಎರಡನೇ ಹಂತದ ಕೆಲಸವನ್ನು ಅವರು ಸ್ವಾಗತಿಸಿದರು. ಬಾಹ್ಯಾಕಾಶ ಸಹಕಾರದ ಮೇಲಿನ ಜಂಟಿ ಕಾರ್ಯ ಯೋಜನೆಯ ಅನುಷ್ಠಾನದ ಬಗ್ಗೆ ಅವರು ತೃಪ್ತಿ ವ್ಯಕ್ತಪಡಿಸಿದರು. ಭೂತಾನ್‌ನಲ್ಲಿ STEM ಶಿಕ್ಷಣ ಮತ್ತು ಆರೋಗ್ಯ ಸೇವೆಗಳಲ್ಲಿ ಭಾರತೀಯ ಶಿಕ್ಷಕರು ಮತ್ತು ನರ್ಸ್‌ಗಳ ಅಮೂಲ್ಯ ಕೊಡುಗೆಗಳನ್ನು ಅವರು ಶ್ಲಾಘಿಸಿದರು.

13. ರಾಜ್‌ಗಿರ್‌ನಲ್ಲಿ ರಾಯಲ್ ಭೂತಾನ್ ದೇವಾಲಯದ ಪ್ರಾಣಪ್ರತಿಷ್ಠೆಯನ್ನು ಇಬ್ಬರೂ ನಾಯಕರು ಸ್ವಾಗತಿಸಿದರು ಹಾಗೂ ವಾರಣಾಸಿಯಲ್ಲಿ ಭೂತಾನ್ ದೇವಾಲಯ ಮತ್ತು ಅತಿಥಿ ಗೃಹ ನಿರ್ಮಾಣಕ್ಕಾಗಿ ಭೂಮಿ ನೀಡುವ ಭಾರತ ಸರ್ಕಾರದ ನಿರ್ಧಾರವನ್ನು ಸ್ವಾಗತಿಸಿದರು.

14. ಭೇಟಿಯ ಸಮಯದಲ್ಲಿ ಎರಡೂ ದೇಶಗಳ ನಡುವೆ ಈ ಕೆಳಗಿನ ತಿಳಿವಳಿಕೆ ಒಪ್ಪಂದಗಳಿಗೆ ಸಹಿ ಹಾಕಲಾಯಿತು:

a. ಭೂತಾನ್ ರಾಯಲ್ ಸರ್ಕಾರ(RGoB)ದ ಇಂಧನ ಮತ್ತು ನೈಸರ್ಗಿಕ ಸಂಪನ್ಮೂಲಗಳ ಸಚಿವಾಲಯ ಮತ್ತು ಭಾರತ ಸರ್ಕಾರ (GoI)ದ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯದ ನಡುವೆ ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಸಹಕಾರದ ಕುರಿತು ತಿಳಿವಳಿಕೆ ಒಪ್ಪಂದ;

b. ಆರೋಗ್ಯ ಮತ್ತು ಔಷಧಿ ಕ್ಷೇತ್ರದಲ್ಲಿ ಸಹಕಾರದ ಕುರಿತು ಆರೋಗ್ಯ ಸಚಿವಾಲಯ, RGoB ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ, GoI ನಡುವೆ ತಿಳಿವಳಿಕೆ ಒಪ್ಪಂದ ;

c. ಸಾಂಸ್ಥಿಕ ಸಂಪರ್ಕಗಳನ್ನು ನಿರ್ಮಿಸಲು PEMA ಸೆಕ್ರೆಟರಿಯೇಟ್ ಮತ್ತು ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ, GoI ನಡುವೆ ತಿಳಿವಳಿಕೆ ಒಪ್ಪಂದ.

15. ಭೂತಾನ್-ಭಾರತ ಪಾಲುದಾರಿಕೆಯು ಆಳವಾದ ನಂಬಿಕೆ, ಆತ್ಮೀಯ ಸ್ನೇಹ, ಪರಸ್ಪರ ಗೌರವ ಮತ್ತು ಎಲ್ಲಾ ಹಂತಗಳಲ್ಲಿ ತಿಳಿವಳಿಕೆಯ ಮೇಲೆ ನಿರ್ಮಿಸಲ್ಪಟ್ಟಿದೆ ಹಾಗೂ ಬಲವಾದ ಜನರ ನಡುವಿನ ಸಂಪರ್ಕಗಳು ಮತ್ತು ನಿಕಟ ಆರ್ಥಿಕ ಮತ್ತು ಅಭಿವೃದ್ಧಿ ಸಹಕಾರದಿಂದ ಇನ್ನಷ್ಟು ಗಟ್ಟಿಯಾಗಿದೆ. ಈ ಭೇಟಿಯು ಎರಡೂ ದೇಶಗಳ ನಡುವಿನ ನಿಯಮಿತ ಉನ್ನತ ಮಟ್ಟದ ವಿನಿಮಯದ ಸಂಪ್ರದಾಯವನ್ನು ಪುನರುಚ್ಚರಿಸಿತು ಮತ್ತು ಭವಿಷ್ಯದಲ್ಲಿ ಅದನ್ನು ಮುಂದುವರಿಸಲು ಎರಡೂ ಕಡೆಯವರು ಒಪ್ಪಿಕೊಂಡರು.

ಥಿಂಪು

ನವೆಂಬರ್ 12, 2025